**<u>ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಕುಣಿಗಲ್.</u>**

**ಸಿ.ಸಿ.ನಂ.8992/2022**

ಸಿ.ಡಬ್ಲ್ಯೂ -07
ಪಿ.ಡಬ್ಲ್ಯೂ-07

ಸಾಕ್ಷಿದಾರನ ಹೆಸರು :- ರಾಜು
ತಂದೆಯ ಹೆಸರು :- ಗಂಗಯ್ಯ
ವಯಸ್ಸು :- 51 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ಬೀಚನಹಳ್ಳಿ

**<u>ಸಾಕ್ಷಿಗೆ ದಿಃ 04.05.2026 ರಂದು ಪ್ರಮಾಣ ವಚನ ಬೋಧಿಸಲಾಯಿತು</u>.**

**<u>ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.</u>**

ಸ್ಥಳಪಂಚನಾಮೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ.2(ಬಿ) ಎಂದು ಗುರುತಿಸಲಾಯಿತು. ಮೂರು ವರ್ಷಗಳ ಹಿಂದೆ ಬೀಚನಹಳ್ಳಿಯಲ್ಲಿ ಪೊಲೀಸರ ಹೇಳಿಕೆಯ ಮೇರೆಗೆ ಸಹಿ ಮಾಡಿದ್ದು ಆ ದಿನ ನನ್ನ ಜೊತೆ ಚಾ.ಸಾ.6 ಸಹ ಹಾಜರಿದ್ದು ಸಮಯ ಸಂಜೆ 4.00 ಗಂಟೆಯಾಗಿರುತ್ತದೆ. ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತು ಮಾಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲಿಗಾಗಿ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಗಿದೆ.)**

**<u>ಪಾಟೀ ಸವಾಲುಃ- ಮಾನ್ಯ ಸ.ಸ.ಅ ರವರಿಂದ.</u>**

ದಿಃ26.06.2022ರಂದು ಬೆಳಗ್ಗೆ 10.30 ರಿಂದ 11.30ರವರೆಗೆ ಪೊಲೀಸರು ಘಟನಾ ಸ್ಥಳದಲ್ಲಿ ಪಂಚನಾಮೆಯನ್ನು ನನ್ನ, ಚಾ.ಸಾ.1ಹಾಗೂ ಚಾ.ಸಾ.6ರವರ ಸಮಕ್ಷಮ ಮಾಡಿ ಒಂದು ಮರದ ಕಾಡುದೊಣ್ಣೆಯನ್ನು ಜಪ್ತು ಮಾಡಿಕೊಂಡಿರುತ್ತಾರೆಂದರೆ ಸರಿಯಲ್ಲ.

ನನ್ನ ಸಮಕ್ಷಮ ಸ್ಥಳಪಂಚನಾಮೆ ಮಾಡಿ ದೊಣ್ಣೆಯ್ನು ಅಮಾನತ್ತುಪಡಿಸಿಕೊಂಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**

**ಮರು ವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.